4. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ. ಡಿ.ವಿ. ಸದಾನಂದ ಗೌಡ (ಮುಖ್ಯ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2011–12ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯ ವಾರ್ಷಿಕ ಪರಿಶೀಲನೆಯನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು. ಈಗ ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ.

5. ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯ

ವಿಷಯ: ಭದ್ರಾವತಿ ಕ್ಷೇತ್ರದ ಶಾಸಕರಾದ ಶ್ರೀ ಬಿ.ಕೆ. ಸಂಗಮೇಶ್ವರ್‌ರವರಿಗೆ ಅಧಿಕಾರಿಗಳಿಂದ ತೊಂದರೆ ಬಗ್ಗೆ.

ಶ್ರೀ ಸಿ.ಎಸ್. ನಾಡಗೌಡ (ಅಪ್ಪಾಜಿ) (ಮುದ್ದೇಬಿಹಾಳ್): ಸಾರ್, ಪತ್ರಿಕೆಯಲ್ಲಿ ಒಂದು ವಿಚಾರ ವರದಿ ಆಗಿದೆ. ಶಾಸಕ ಸಂಗಮೇಶ್ವರ್ ರಾಜೀನಾಮೆ ಎಂದು ಹೇಳಿ ಹಲವಾರು ಪತ್ರಿಕೆಯಲ್ಲಿ ವರದಿ ಬಂದಿದೆ. ನಮಗೆ ಅದರ ಬಗ್ಗೆ ಏನೂ ಗೊತ್ತಾಗಲಿಲ್ಲ.

ಅಧ್ಯಕ್ಷರು: ನನಗೆ ಯಾವುದೇ ರಾಜೀನಾಮೆ ಬರಲಿಲ್ಲ. ನನಗೆ ಯಾರೂ ರಾಜೀನಾಮೆ ಪತ್ರವನ್ನು ಕೊಟ್ಟಿಲ್ಲ.

ಶ್ರೀ ಸಿ.ಎಸ್. ನಾಡಗೌಡ (ಅಪ್ಪಾಜಿ) : ಅವರು ಪತ್ರಿಕೆಯಲ್ಲಿ ಹೇಳಿದ್ದಾರೆ. ನನಗೆ ಜಿಲ್ಲಾ ಆಡಳಿತದಿಂದ ತೊಂದರೆ ಆಗುತ್ತಿದೆ. ಅಧಿಕಾರಿಗಳಿಂದ ತೊಂದರೆ ಆಗುತ್ತಿದೆ. ನನ್ನ ಮೇಲೆ ಸಾಕಷ್ಟು ಹಲ್ಲೆ ಆಗಿದೆ. ನನಗೆ ಮಾನಸಿಕ ತೊಂದರೆ ಆಗಿ ನಾನು ರಾಜೀನಾಮೆ ಕೊಟ್ಟಿದ್ದೇನೆಂದು ಹೇಳಿದ್ದಾರೆ. ಇದರ ಬಗ್ಗೆ ನಾವು ಬಹಳ ಗಂಭೀರವಾಗಿ ಆಲೋಚನೆ ಮಾಡಬೇಕಾಗುತ್ತದೆ.

ಅಧ್ಯಕ್ಷರು : ಮೊನ್ನೆ ಬಿಎಸಿ ಯಲ್ಲಿ ತೀರ್ಮಾನ ಆಯಿತಾ?

ಶ್ರೀ ಸಿ.ಎಸ್. ನಾಡಗೌಡ (ಅಪ್ಪಾಜಿ) : ಆ ಅಧಿಕಾರಿಗಳ ವರ್ಗಾವಣೆ ಮಾಡಿ, action ಆಮೇಲೆ ಆಗಲಿ. ವರ್ಗಾವಣೆ ಆದರೂ ಮಾಡಿ.

ಶ್ರೀ ಸಿದ್ದರಾಮಯ್ಯ : ಮಾನ್ಯ ಅಧ್ಯಕ್ಷರೆ, ಬಿಎಸಿನಲ್ಲಿ ಕೂಡ ಪ್ರಸ್ತಾಪ ಮಾಡಿದ್ದೇವೆ.